# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಜೇನುಕುರಬ ಜನಾಂಗದವರ ಆರೋಗ್ಯ ಸ್ಥಿತಿ-ಗತಿ ಕುರಿತು ಅಧ್ಯಯನ ಕೈಗೊಳ್ಳುವ ಕುರಿತು.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಸಕಇ 56 ಪವಯೋ 2010 ದಿನಾಂಕ 14-03-2012

2. ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇವರ ಪತ್ರ ಸಂಖ್ಯೆ: ಟಿಆರ್ಐ/ ಮೈ/ ಸಿಆರ್/2012-13, ದಿನಾಂಕ: 01-10-2012

3. ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು, ಇವರ ಪತ್ರ ಸಂಖ್ಯೆ:ಟಿಆರ್ಐ/ಮೈ/ಸಿಆರ್-52/2011-12, ದಿನಾಂಕ: 09-11-2012.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ 2011-12ನೇ ಸಾಲಿಗೆ ಕರ್ನಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆಗೆ ಕೇಂದ್ರ ಹಾಗೂ ರಾಜ್ಯ ಪಾಲುಗಳ ಅನುದಾನದಲ್ಲಿ ಸಂಶೋಧನೆಗಾಗಿ ಕೇಂದ್ರವಾರು ಮತ್ತು ರಾಜ್ಯವಾರು ಪಾಲು ಒಟ್ಟು ರೂ.4.00 ಲಕ್ಷಗಳ ಅನುದಾನವನ್ನು ಲೆಕ್ಕ ಶೀರ್ಷಿಕೆ "2225-02-800-0-01(ಯೋಜನೆ)" ಅಡಿಯಲ್ಲಿ ಬಿಡುಗಡೆ ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2) ಮತ್ತು (3)ರ ಪತ್ರಗಳಲ್ಲಿ ನಿರ್ದೇಶಕರು, ಗಿರಿಜನ ಸಂಶೋಧನ ಸಂಸ್ಥೆ, ಮೈಸೂರು, ಇವರು ಮೇಲ್ಕಂಡ ಅನುದಾನ ಮೊತ್ತ ರೂ.4.00 ಲಕ್ಷಗಳಲ್ಲಿ ಕರ್ನಾಟಕದಲ್ಲಿನ ಜೇನುಕುರಬ ಜನಾಂಗದವರ ಆರೋಗ್ಯ ಸ್ಥಿತಿ-ಗತಿ ಕುರಿತು ಅಧ್ಯಯನವನ್ನು ಕೈಗೊಳ್ಳಲು ಸರ್ಕಾರದ ಮಂಜೂರಾತಿ ನೀಡುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

## ಸರ್ಕಾರಿ ಆದೇಶ ಸಂಖ್ಯೆ: ಸಕಇ 219 ಪವಯೋ 2012, ಬೆಂಗಳೂರು
## ದಿನಾಂಕ:18-03-2013

ಕರ್ನಾಟಕ ರಾಜ್ಯದಲ್ಲಿನ ಜೇನು ಕುರುಬ ಮೂಲನಿವಾಸಿ ಬುಡಕಟ್ಟು ಜನಾಂಗದವರ ಆರೋಗ್ಯ ಸ್ಥಿತಿ-ಗತಿ ಕುರಿತು, ಪ್ರಸ್ತಾವನೆಯಲ್ಲಿ ಸಲ್ಲಿಸಿರುವ ಮಾದರಿಯಲ್ಲಿ ಅಧ್ಯಯನವನ್ನು ರೂ.4.00 ಲಕ್ಷಗಳ ವೆಚ್ಚದಲ್ಲಿ ಕೈಗೊಳ್ಳಲು ನಿರ್ದೇಶಕರು, ಗಿರಿಜನ ಸಂಶೋಧನ ಸಂಸ್ಥೆ, ಮೈಸೂರು, ಇವರಿಗೆ ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಅಧ್ಯಯನವನ್ನು 6 ತಿಂಗಳ ಅವಧಿಯಲ್ಲಿ ಪೂರ್ಣಗೊಳಿಸಿ, ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ 04ಟಿಎಫ್‌ಪಿ2012, ದಿನಾಂಕ: 27-06-2012 ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಮಾಜ ಕಲ್ಯಾಣ ಇಲಾಖೆ

ಇವರಿಗೆ:

1) ಮಹಾಲೇಖಪಾಲರು, (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು.
2) ನಿರ್ದೇಶಕರು, ಕರ್ನಾಟಕ ರಾಜ್ಯ ಗಿರಿಜನ ಸಂಶೋಧನಾ ಸಂಸ್ಥೆ, ಮೈಸೂರು.
3) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳ ಶಾಖೆ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5) ಸರ್ಕಾರದ ಉಪ ಕಾರ್ಯದರ್ಶಿ-2, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
6) ಶಾಖಾ ರಕ್ಷ ಕಡತ.
7) ಹೆಚ್ಚುವರಿ ಪ್ರತಿ-03.